**ಹೆಚ್ಚುವರಿ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹೊನ್ನಾಳಿ**

**ಸಿ.ಸಿ. ನಂ.1354/2021**

**ಪಿರ್ಯಾದುದಾರರು ::** ನ್ಯಾಮತಿ ಪೊಲೀಸರು.

**- ವಿರುದ್ಧ -**

**ಆರೋಪಿ** ನಾಗರಾಜ ಬಿನ್ ಈರಪ್ಪ , 40 ವರ್ಷ,
ವಾಸಃ ಜಯನಗರ ಗ್ರಾಮ, ನ್ಯಾಮತಿ ತಾಲ್ಲೂಕು.

**::ಆಪಾದನೆ::** ದೋಷಾರೋಪಣೆ

ಶ್ರೀ ದೇವದಾಸ್ ಹೆಚ್. ಬಿ.ಎ., ಎಲ್‌ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಹೊನ್ನಾಳಿ ಆದ ನಾನು ಮಾಡಿದ ದೋಷಾರೋಪಣೆ ಏನೆಂದರೆಃ

ದಿನಾಂಕಃ 24-04-2021 ರಂದು ರಾತ್ರಿ 7.10 ಗಂಟೆ ಸಮಯದಲ್ಲಿ ನ್ಯಾಮತಿ ಪೋಲೀಸ್ ಠಾಣಾ ವ್ಯಾಪ್ತಿಯ, ಜಯನಗರ ಗ್ರಾಮದಲ್ಲಿ ಆರೋಪಿ ಸಾರ್ವಜನಿಕ ಸಿಮೆಂಟ್ ರಸ್ತೆಯಲ್ಲಿ ಆರೋಪಿಯಾದ ನೀವು 90 ಎಂ.ಎಲ್.ನ ಓರಿಜಿನಲ್ ಚಾಯ್ಸ್ ಡೀಲಕ್ಸ್ ವಿಸ್ಕಿ 88 ಪೌಚ್‌ಗಳನ್ನು ಸರ್ಕಾರದಿಂದ ಯಾವುದೇ ಪರವಾನಗಿ ಇಲ್ಲದೆ ಸಾರ್ವಜನಿಕ ಸ್ಥಳದಲ್ಲಿ ಮದ್ಯ ಮಾರಾಟ ಮಾಡಿರುತ್ತೀರಿ. ಆ ಮೂಲಕ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ.32 ರಡಿಯಲ್ಲಿ ದಂಡಿಸಲ್ಪಡುವ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞೇಯತೆಯಲ್ಲಿ ಮಾಡಿರುತ್ತೀರಿ.

2. ಮೇಲ್ಕಂಡ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಓರಿಜಿನಲ್ ಚಾಯ್ಸ್ ಡೀಲಕ್ಸ್ ವಿಸ್ಕಿಗಳನ್ನು ಯಾವುದೇ ಪರವಾನಗಿ ಇಲ್ಲದೆ ಮಾರಾಟ ಮಾಡುವ ಸಲುವಾಗಿ ಅಕ್ರಮವಾಗಿ ಸ್ವಾಧೀನ ಹೊಂದಿರುತ್ತೀರಿ. ಆ ಮೂಲಕ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ.34 ರಡಿಯಲ್ಲಿ ದಂಡಿಸಲ್ಪಡುವ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞೇಯತೆಯಲ್ಲಿ ಮಾಡಿರುತ್ತೀರಿ.

18/2318

**ಪ್ರಶ್ನೆ** - ನಿಮಗೆ ಮೇಲೆ ತಿಳಿಸಿದ ಆರೋಪಣೆಯ ಎಲ್ಲಾ ಸಾರಾಂಶ ತಿಳಿಯಿತೇ?

**ಉತ್ತರ-** ಹೌದು ನಾಗರಾಜ

**ಪ್ರಶ್ನೆ** - ನೀವು ಸದರಿ ಆರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆ ಬಯಸುವಿರೋ?

**ಉತ್ತರ-** ವಿಚಾರಣೆ ನಾಗರಾಜ

(ಮೇಲ್ಕಂಡ ಆಪಾದನೆಯನು ಆರೋಪಿಗೆ ತಿಳಿದ ಕನ್ನಡ ಭಾಷೆಯಲ್ಲಿ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ತೆರೆದ ನ್ಯಾಯಾಲಯದಲ್ಲಿ ಬರೆದುಕೊಳ್ಳಲಾಯಿತು.)

23/8

(ಶ್ರೀ ದೇವದಾಸ್ ಹೆಚ್)
ಹೆಚ್ಚುವರಿ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.
ನ್ಯಾಯಾಲಯ, ಹೊನ್ನಾಳಿ.

ಸ್ಥಳ ಃ- ಹೊನ್ನಾಳಿ.
ದಿನಾಂಕಃ 23-08-2023